# ನೆಲಮಂಗಲ ಯೋಜನಾ ಪ್ರಾಧಿಕಾರ

E-mail : nelamangala.pa@gmail.com

**2ನೇ ಮುಖ್ಯ ರಸ್ತೆ, ಸದಾಶಿವನಗರ, ನೆಲಮಂಗಲ – 562 123, ಬೆಂಗಳೂರು ಗ್ರಾಮಾಂತರ ಜಿಲ್ಲೆ**

## ಕರಡು ವಿನ್ಯಾಸ ಅನುಮೋದನೆ ಅದೇಶ ಪತ್ರ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 (2) (C) ರಡಿಯಲ್ಲಿ)

ಸಂಖ್ಯೆ:ನೆಯೋಪ್ರಾ:ಎಲ್ಎಓ:27:2022-23 ದಿನಾಂಕ: 6 MAR 2023

**ವಿಷಯ:** ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಮತ್ತಹಳ್ಳಿ ಗ್ರಾಮದ ಸ.ನಂ.47/2 ರಲ್ಲಿ 00 ಎಕರೆ-31ಗುಂಟೆ, ಸ.ನಂ.47/3 ರಲ್ಲಿ 00ಎಕರೆ- 28ಗುಂಟೆ, ಸ.ನಂ.47/4ರಲ್ಲಿ 00ಎಕರೆ- 29ಗುಂಟೆ, ಸ.ನಂ.47/6 ರಲ್ಲಿ 01ಎಕರೆ- 24ಗುಂಟೆ, ಸ.ನಂ.47/8 ರಲ್ಲಿ 02ಎಕರೆ- 03ಗುಂಟೆ (00ಎಕರೆ- 08ಗುಂಟೆ ಗ್ಯಾಸ್ ಲೈನ್ ಗಾಗಿ ಹೊರತು ಪಡಿಸಿದೆ), ಸ.ನಂ.47/ 9 ರಲ್ಲಿ 00ಎಕರೆ- 27ಗುಂಟೆ, ಸ.ನಂ.47/10 ರಲ್ಲಿ 00ಎಕರೆ-19ಗುಂಟೆ, ಸ.ನಂ.47/11 ರಲ್ಲಿ 00ಎಕರೆ- 07 ಗುಂಟೆ (00ಎಕರೆ- 02ಗುಂಟೆ ಗ್ಯಾಸ್ ಲೈನ್ ಗಾಗಿ ಹೊರತು ಪಡಿಸಿದೆ), ಸ.ನಂ.47/12 ರಲ್ಲಿ 00ಎಕರೆ- 22ಗುಂಟೆ, ಸ.ನಂ.47/14 ರಲ್ಲಿ 00ಎಕರೆ- 18ಗುಂಟೆ, ಸ.ನಂ.47/15 ರಲ್ಲಿ 00ಎಕರೆ- 31ಗುಂಟೆ ಮತ್ತು ಸ.ನಂ.47/17 ರಲ್ಲಿ 00ಎಕರೆ- 09 ಗುಂಟೆ ಒಟ್ಟು 09ಎಕರೆ-08ಗುಂಟೆ ವಿಸ್ತೀರ್ಣದ ಜಮೀನಿನ **ಬಹು ನಿವೇಶನ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ** ನೀಡುವ ಬಗ್ಗೆ.

**ಉಲ್ಲೇಖ:**
1. ಅರ್ಜಿದಾರರ ಮನವಿ ದಿನಾಂಕ:12-07-2022.
2. ದಿನಾಂಕ:10-11-2022 ರ ಪ್ರಾಧಿಕಾರದ 111ನೇ ಸಭೆಯ ವಿಷಯ ಸಂಖ್ಯೆ:111.6.7 ರ ನಿರ್ಣಯ.
3. ಪ್ರಾಧಿಕಾರಕ್ಕೆ ಹಣ ಪಾವತಿಸಿದ ಬಗ್ಗೆ ರಶೀದಿ ನಂ.10459 ದಿನಾಂಕ:13-12-2022 ರೂ.33,39,700/-
4. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ/24/ಶಾಸನ /2015, ದಿನಾಂಕ:10-09-2015 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ/26/ಶಾಸನ/2021, ದಿನಾಂಕ:05-07-2021.

**************

ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಮತ್ತಹಳ್ಳಿ ಗ್ರಾಮದ ಸ.ನಂ.47/2 ರಲ್ಲಿ 00 ಎಕರೆ- 31ಗುಂಟೆ, ಸ.ನಂ.47/3 ರಲ್ಲಿ 00ಎಕರೆ- 28ಗುಂಟೆ, ಸ.ನಂ.47/4ರಲ್ಲಿ 00ಎಕರೆ- 29ಗುಂಟೆ, ಸ.ನಂ.47/6 ರಲ್ಲಿ 01ಎಕರೆ- 24ಗುಂಟೆ, ಸ.ನಂ.47/8 ರಲ್ಲಿ 02ಎಕರೆ- 03ಗುಂಟೆ (00ಎಕರೆ- 08ಗುಂಟೆ ಗ್ಯಾಸ್ ಲೈನ್ ಗಾಗಿ ಹೊರತು ಪಡಿಸಿದೆ), ಸ.ನಂ.47/ 9 ರಲ್ಲಿ 00ಎಕರೆ- 27ಗುಂಟೆ, ಸ.ನಂ.47/10 ರಲ್ಲಿ 00ಎಕರೆ- 19ಗುಂಟೆ, ಸ.ನಂ.47/11 ರಲ್ಲಿ 00ಎಕರೆ- 07 ಗುಂಟೆ (00ಎಕರೆ- 02ಗುಂಟೆ ಗ್ಯಾಸ್ ಲೈನ್ ಗಾಗಿ ಹೊರತು ಪಡಿಸಿದೆ), ಸ.ನಂ.47/12 ರಲ್ಲಿ 00ಎಕರೆ- 22ಗುಂಟೆ, ಸ.ನಂ.47/14 ರಲ್ಲಿ 00ಎಕರೆ- 18ಗುಂಟೆ, ಸ.ನಂ.47/15 ರಲ್ಲಿ 00ಎಕರೆ- 31ಗುಂಟೆ ಮತ್ತು ಸ.ನಂ.47/17 ರಲ್ಲಿ 00ಎಕರೆ- 09 ಗುಂಟೆ ಒಟ್ಟು 09ಎಕರೆ-08ಗುಂಟೆ ವಿಸ್ತೀರ್ಣದ ಜಮೀನಿನ **ಬಹು ನಿವೇಶನ ವಸತಿ ವಿನ್ಯಾಸ ನಕ್ಷೆಗೆ** ಅನುಮೋದನೆ ನೀಡಲು ಉಲ್ಲೇಖ (1) ರಲ್ಲಿ ಅರ್ಜಿದಾರರು ಕೋರಿದ್ದು, ತಹಸೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು ಅವರಿಂದ ಜಮೀನಿನ ದೃಢೀಕರಿಸಿದ

ನಕ್ಷೆಯನ್ನು ದಿನಾಂಕ:07-01-2023 ರಂದು ಸ್ವೀಕರಿಸಿದೆ. ಪ್ರಸ್ತಾವನೆಯನ್ನು ಉಲ್ಲೇಖ (2) ರಂತೆ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿದ್ದು, ಸದರಿ ಸಭೆಯಲ್ಲಿ ಪ್ರಶ್ನಿತ ಜಮೀನಿನ ಬಹು ನಿವೇಶನ ವಸತಿ ವಿನ್ಯಾಸ ನಕ್ಷೆಗೆ **ತಾತ್ಕಾಲಿಕ ಅನುಮೋದನೆ** ನೀಡಲು ತೀರ್ಮಾನಿಸಲಾಗಿರುತ್ತದೆ. ಉಲ್ಲೇಖ (3) ರಂತೆ ಅಗತ್ಯ ಶುಲ್ಕಗಳನ್ನು ಪಾವತಿಸಿಕೊಂಡು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2) (C) ರಂತೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಉಲ್ಲೇಖ (4) ರನ್ವಯ **ಶೇ.40 ರಷ್ಟು ನಿವೇಶನಗಳನ್ನು ಮಾರಾಟ ಮಾಡಲು ಬಿಡುಗಡೆಗೊಳಿಸಲು ಕೇವಲ ವಿನ್ಯಾಸವನ್ನು ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಬಹು ನಿವೇಶನ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.**

| ಕ್ರಮ ಸಂಖ್ಯೆ | ಷರತ್ತುಗಳು |
|---|---|
| 1. | ಈಗ ನೀಡಿರುವ ವಿನ್ಯಾಸ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು. |
| 2. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ಕಾಯ್ದಿರಿಸಿರುವಂತೆ ಉದ್ಯಾನವನ, ಬಯಲು ಜಾಗ ಮತ್ತು ರಸ್ತೆಗಾಗಿ ಕಾಯ್ದಿರಿಸಿದ ಪ್ರದೇಶಗಳನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗೆ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ನೋಂದಾಯಿತ ಪರಿತ್ಯಾಜನ ಪತ್ರದ ಮೂಲಕ ಹಸ್ತಾಂತರಿಸುವುದು ಹಾಗೂ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿರುವ ಎಲ್ಲಾ ಮೂಲೆ ನಿವೇಶನಗಳ ನೋಂದಾಯಿತ ಅಡಮಾನ ಒಪ್ಪಂದ ಪತ್ರವನ್ನು ಮತ್ತು ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ - 2016 ರ ರೀತ್ಯ ರಿಯಲ್ ಎಸ್ಟೇಟ್ (ನಿಯಂತ್ರಣ ಪ್ರಾಧಿಕಾರ ( RERA ) ದಲ್ಲಿ ಸದರಿ ಯೋಜನೆಯ ನೋಂದಾಯಿಸಿರುವ ಬಗ್ಗೆ ಪ್ರಮಾಣ ಪತ್ರವನ್ನು ಪ್ರಾಧಿಕಾರಕ್ಕೆ ಸಲ್ಲಿಸಿದ ನಂತರ **ಶೇ.40 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸಲು** ಮುಂದಿನ ಕ್ರಮ ವಹಿಸಲಾಗುವುದು |
| 3. | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಸದರಿ ಬಡಾವಣೆಯಲ್ಲಿ ಕ್ರಮ ಕೈಗೊಳಬೇಕಾಗಿರುವ ನೀರು ಸರಬಾರಾಜು ಮತ್ತು ಒಳಚರಂಡಿ ವ್ಯಾವಸ್ಥೆಯ ಬಗ್ಗೆ ಅನುಮತಿ ಪಡೆದು ಅದರಂತೆ, ನೀರು ಸರಬಾರಾಜು ಮತ್ತು ಒಳಚರಂಡಿಯ ಕಾಮಗಾರಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ **ರವರ Specification ಅನುಗುಣವಾಗಿ ನಿಯಮಾನುಸಾರ ತೃಪ್ತಿಕರವಾಗಿ ಪೂರ್ಣಗೊಳಿಸಿ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ.** |
| 4. | ಈಗ ನೀಡಿರುವ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯು ತಾತ್ಕಾಲಿಕವಾಗಿದ್ದು, ವಿನ್ಯಾಸವನ್ನು ಸ್ಥಳದಲ್ಲಿ ಯಥಾವತ್ತಾಗಿ ಅಳವಡಿಸಿ, ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವ ಸಲುವಾಗಿ ಮಾತ್ರ ನೀಡಲಾಗಿರುತ್ತದೆ. |
| 5. | ಪ್ರಸ್ತಾವಿತ ಜಾಗವು TGR ನ ವಲಯ-1 ರಲ್ಲಿ ಇರುವುದರಿಂದ ತಿಪ್ಪಗೊಂಡನಹಳ್ಳಿ ಜಲಾನಯನ ಪ್ರದೇಶದ ಸಂರಕ್ಷಣೆಗಾಗಿ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ:FEE:215:ENV:2000 ದಿನಾಂಕ:18-11-2003 ರಲ್ಲಿನ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲಿಸಿ ತಕ್ಕದ್ದು. ಹಾಗೂ TGR ನ ವಲಯಗಳಿಗೆ |

| | |
|---|---|
| | ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ:WP.No-38218/2013 ಮತ್ತು ಇತರೆ ಪ್ರಕರಣಗಳಲ್ಲಿ "ಮಾನ್ಯ ಉಚ್ಛ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ" ಒಳಪಟ್ಟಿರುತ್ತದೆ. |
| 6. | ಕರ್ನಾಟಕ ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಗಳು, 2017 ಅಡಿಯಲ್ಲಿ ಸ್ಥಾಪಿಸಲಾಗಿರುವ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ "ಸದರಿ ವಸತಿ ವಿನ್ಯಾಸ/ ಬಡಾವಣೆಯನ್ನು ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳತಕ್ಕದ್ದು ಹಾಗೂ ನಿಯಮಗಳನ್ವಯ ಕ್ರಮ ಜರುಗಿಸತಕ್ಕದ್ದು." |
| 7. | ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ಮಾತ್ರ ವಿನ್ಯಾಸ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ಈ ವಸತಿ ವಿನ್ಯಾಸ ನಕ್ಷೆಯಲ್ಲಿನ ಯಾವುದೇ ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಿರುವುದಿಲ್ಲ. ಹಾಗಾಗಿ ವಿನ್ಯಾಸದಲ್ಲಿನ ನಿವೇಶನಗಳನ್ನು ಮಾರಾಟ ಅಥವಾ ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ನಿವೇಶನಗಳಲ್ಲಿರುವ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದಲ್ಲ ಅಥವಾ ನೀಡತಕ್ಕದಲ್ಲ. |
| 8. | ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾದ ಪ್ರಕಟಣೆ ಸಂಖ್ಯೆ:ಸಂವ್ಯಶಾಇ/24/ಶಾಸನ/2015, ಬೆಂಗಳೂರು,ದಿನಾಂಕ:10-09-2015 ರಲ್ಲಿ ತಿದ್ದುಪಡಿ ತಂದಿರುವ ಕಾಯ್ದೆಗೆ ಅನುಗುಣವಾಗಿ ವಿನ್ಯಾಸವನ್ನು ಅಭಿವೃದ್ಧಿ ಪಡಿಸುವ ಸಲುವಾಗಿ ಮಾತ್ರ ಈ ವಿನ್ಯಾಸವನ್ನು ಅನುಮೋದಿಸಲಾಗಿದ್ದು, ಯಾವುದೇ ನಿವೇಶನಗಳನ್ನು ಮಾರಾಟ ಮಾಡಲು, ಖಾತಾ ಮಾಡಲು ಅಥವಾ ಭೋಗ್ಯ/ ಇತರೆ ಅಡಮಾನಗಳಿಗೆ ಅವಕಾಶವಿರುವುದಿಲ್ಲ. |
| 9. | ಈ ವಸತಿ ವಿನ್ಯಾಸ ನಕ್ಷೆಯಲ್ಲಿರುವಂತೆಯೇ ನಿವೇಶನಗಳನ್ನು, ರಸ್ತೆಗಳನ್ನು, ಉದ್ಯಾನವನಕ್ಕಾಗಿ ಕಾಯ್ದಿರಿಸಿದ ಪ್ರದೇಶಗಳನ್ನು ಸ್ಥಳದಲ್ಲಿ ಯಥಾವತ್ತಾಗಿ ಅಳವಡಿಸುವುದು. ಉದ್ಯಾನವನಕ್ಕಾಗಿ ಕಾಯ್ದಿರಿಸಿದ ಪ್ರದೇಶದ ಸುತ್ತಲೂ Chain Linking Fencing ಮಾಡುವುದು. ಬಡಾವಣೆಯಲ್ಲಿ ಡಾಂಬರೀಕೃತ ರಸ್ತೆ, ಮಳೆ ನೀರಿನ ಚರಂಡಿ, ಕಲ್ವರ್ಟ್ಸ್, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಸಂಪರ್ಕ ವ್ಯವಸ್ಥೆಗಳನ್ನು ಕಲ್ಪಿಸತಕ್ಕದ್ದು ಹಾಗೂ ವಿನ್ಯಾಸದಲ್ಲಿ ಗುರುತಿಸಲಾಗಿರುವ ಸ್ಥಳದಲ್ಲಿಯೇ ಪ್ರಮಾಣೀಕೃತ ರೀತಿಯಲ್ಲಿ Septic Tank / Soak Pit ಅನ್ನು ನಿರ್ಮಿಸುವುದು ಹಾಗೂ ರಸ್ತೆಯ ಎರಡೂ ಬದಿಗಳಲ್ಲೂ ಸಾಲು ಮರಗಳ ನೆಡುವಿಕೆ ಮುಂತಾದ ಎಲ್ಲಾ ಕಾಮಗಾರಿಗಳೊಂದಿಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿರುವ ಬಗ್ಗೆ ಹಾಗೂ ಎಲ್ಲಾ ಕಾಮಗಾರಿಗಳನ್ನು ಮುಗಿಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರ / ಸಂಸ್ಥೆ / ಇಲಾಖೆಗಳಿಂದ ಪ್ರಮಾಣ ಪತ್ರ / ದೃಢೀಕರಣ ಪತ್ರ / ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ವಿನ್ಯಾಸದ ಅಂತಿಮ ಅನುಮೋದನೆ ಪಡೆಯತಕ್ಕದ್ದು. |
| 10. | ಸದರಿ ವಿನ್ಯಾಸದಲ್ಲಿ ಮಳೆ ನೀರು ಸರಾಗವಾಗಿ ಹರಿಯುವಂತೆ ತೆರೆದ ಚರಂಡಿಗಳನ್ನು ನಿರ್ಮಿಸಿ, ಚರಂಡಿಗಳಲ್ಲಿ ಹೂಳು ಸಂಗ್ರಹವಾಗದಂತೆ ಹಾಗೂ ನೀರು ಸರಾಗವಾಗಿ ಹರಿಯುವಂತೆ ಕ್ರಮವಹಿಸುವುದು. |
| 11. | ರಾಜಕಾಲುವೆಗಳನ್ನು ಮುಚ್ಚದಂತೆ ಕ್ರಮವಹಿಸಿ, ರಾಜಕಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ನೋಡಿಕೊಳ್ಳತಕ್ಕದ್ದು, ಮತ್ತು ರಾಜಕಾಲುವೆಗಳನ್ನು ಅತಿಕ್ರಮಣ / ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯುವಂತೆ |

| | |
|---|---|
| | ಕ್ರಮವಹಿಸತಕ್ಕದ್ದು. |
| 12. | ನೀರು ಸರಬಾರಾಜು ಮತ್ತು ಒಳಚರಂಡಿಯ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬೆಂಗಳೂರು ಉತ್ತರ ತಾಲ್ಲೂಕು ರವರ **Specification** ಅನುಗುಣವಾಗಿ ನಿಯಮಾನುಸಾರ ತೃಪ್ತಿಕರವಾಗಿ ಪೂರ್ಣಗೊಳಿಸಿ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ. |
| 13. | ವಿನ್ಯಾಸವನ್ನು ಕಾರ್ಯಗತಗೊಳಿಸುವ ಮೊದಲು ಸ್ಥಳೀಯ ಸಂಸ್ಥೆ ಕಾಯ್ದೆಯಡಿ ಸಂಬಂಧಿತ ಗ್ರಾಮ ಪಂಚಾಯಿತಿ ವತಿಯಿಂದ ಪರವಾನಗಿ ಪಡೆಯತಕ್ಕದ್ದು. |
| 14. | ಈ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಈ ವಸತಿ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು ಹಾಗೂ ಅನುಮೋದನೆ ನೀಡಲಾದ ನಿರ್ದಿಷ್ಟ ಬಳಕೆಗೆ ಮಾತ್ರ ಉಪಯೋಗಿಸತಕ್ಕದ್ದು. |
| 15. | ಈ ವಿನ್ಯಾಸದಲ್ಲಿ ಇರುವಂತಹ 'ಬಿ' ಖರಾಬು ಜಾಗಗಳು ಸರ್ಕಾರಕ್ಕೆ ಸೇರಿದವುಗಳಾಗಿದ್ದು, ಈ ಜಾಗಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಇವುಗಳನ್ನು ಅತಿಕ್ರಮಣ ಮಾಡತಕ್ಕದ್ದಲ್ಲ, **ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರ ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-78/06-07 ದಿನಾಂಕ:06-03-2021, ಅಧಿಕೃತ ಜ್ಞಾಪನ ಅರ್ಜಿ ಸಂಖ್ಯೆ:220235 ದಿನಾಂಕ:31-07-2021, ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-95/06-07 ದಿನಾಂಕ:04-12-2015, ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-14/05-06 ದಿನಾಂಕ:26-02-2018, ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-14/05-06 ದಿನಾಂಕ:04-12-2013, ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-94/06-07 ದಿನಾಂಕ:07-12-2009, ಅಧಿಕೃತ ಜ್ಞಾಪನ ಸಂಖ್ಯೆ:ALN(NDH)SR-80/10-11 ದಿನಾಂಕ:26-04-2011, ಅರ್ಜಿ ಸಂಖ್ಯೆ:220233 ದಿನಾಂಕ:31-07-2021 , ಅರ್ಜಿ ಸಂಖ್ಯೆ:404592 ದಿನಾಂಕ:03-10-2022 & ಅರ್ಜಿ ಸಂಖ್ಯೆ:2404852 ದಿನಾಂಕ:03-10-2022** ರಲ್ಲಿನ ಷರತ್ತುಗಳನ್ನು ತಪ್ಪದೇ ಪಾಲ್ಲಿಸತಕ್ಕದ್ದು. |
| 16. | ಈ ಅನುಮೋದಿತ ವಿನ್ಯಾಸ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆಗಳಲ್ಲಿ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು. |
| 17. | ಈ ವಿನ್ಯಾಸದ ಸುತ್ತಲೂ ಕಾಂಪೌಂಡ್ ನಿರ್ಮಿಸಿ, ಗೇಟ್ ಅನ್ನು ಅಳವಡಿಸಿ ಗೇಟೆಡ್ ಕಮ್ಯೂನಿಟಿ ಎಂಬ ಹೆಸರಿನಲ್ಲಿ ನಿವೇಶನಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಈ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆಗಳು, ಸಾರ್ವಜನಿಕ ರಸ್ತೆಗಳಾಗಿದ್ದು ಇವುಗಳನ್ನು ಸಾರ್ವಜನಿಕ ಉಪಯೋಗಕ್ಕಾಗಿ ಮಾತ್ರ ಇರಿಸತಕ್ಕದ್ದು. ಈ ರಸ್ತೆಗಳಿಗೆ ಅಡ್ಡಲಾಗಿ ತಡೆಗೋಡೆಯನ್ನು ನಿರ್ಮಿಸತಕ್ಕದ್ದಲ್ಲ ಹಾಗೂ ಈ ರಸ್ತೆಗಳಿಂದ ಅಕ್ಕಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ. |
| 18. | ಈ ವಿನ್ಯಾಸದಲ್ಲಿನ ಉದ್ಯಾನವನ ಮತ್ತು ರಸ್ತೆಗಳು ಸಾರ್ವಜನಿಕ ಸ್ವತ್ತಾಗಿರುತ್ತವೆ. ಆದ್ದರಿಂದ, ಈ ಸಾರ್ವಜನಿಕ ಸ್ವತ್ತುಗಳನ್ನು ಸಾರ್ವಜನಿಕರಿಗೆ ಮುಕ್ತವಾಗಿಡತಕ್ಕದ್ದು. |
| 19. | ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಕಲಂ 17 |

| | |
|---|---|
| | ರಡಿಯಲ್ಲಿ ನೀಡುತ್ತಿರುವುದರಿಂದ ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸುವ ಸಲುವಾಗಿ ಉಪಯೋಗಿಸಲು ಬರುವುದಿಲ್ಲ ಹಾಗೂ ಈ ಜಮೀನುಗಳಿಗೆ ಸಂಬಂಧಿಸಿದ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ. |
| 20. | ಪ್ರಸ್ತಾವಿತ ಜಮೀನುಗಳು ಯಾವುದೇ ಭೂ ಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ, ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ. |
| 21. | ಒಂದು ವೇಳೆ ಸರ್ಕಾರವು ಪೂರ್ವಾನ್ವಯವಾಗುವಂತೆ ನಿಗದಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಅರ್ಜಿದಾರರು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು. |
| 22. | ಅನುಮೋದಿತ ವಿನ್ಯಾಸದಲ್ಲಿನ ನಿವೇಶನಗಳಲ್ಲಿ ಮಳೆನೀರು ಸಂಗ್ರಹಣಾ ಪದ್ಧತಿ ಹಾಗೂ Solar Water Heater ಅನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು. |
| 23. | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ರವರ ಪತ್ರದ ಸಂಖ್ಯೆ: PCB:WMC:2096:2018-19:125 ರನ್ವಯ STORM WATER DRAIN ಗಳಲ್ಲಿ ಒಳಹರಿವಿಗಾಗಿ ಹಾಗೂ ಸ್ವಚ್ಛತೆಯನ್ನು ಕಾಪಾಡುವ ಸಲುವಾಗಿ Storm water drain ಗಳನ್ನು ಮುಚ್ಚದೆ ಇರುವಂತೆ ಮತ್ತು ಕಾಲಕಾಲಕ್ಕೆ Desilt ಮಾಡತಕ್ಕದ್ದು. |
| 24. | ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 209 ಬಿಎಂಆರ್ 2016.ದಿನಾಂಕ : 31.03.2017 ರ ರೀತ್ಯಾ ಪತ್ರಿಕೆ, ಮಾಧ್ಯಮ, ಜಾಹೀರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಪಡೆದುಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು. |
| 25. | ಈ ವಿನ್ಯಾಸ ನಕ್ಷೆಯ ಅನುಮೋದನೆಯ ಸಲುವಾಗಿ ಸಲ್ಲಿಸಲಾಗಿರುವ ಭೂ ಮಾಲೀಕತ್ವದ ದಾಖಲೆಗಳು, ಸರ್ವೆಸ್ಕೆಚ್ ಮತ್ತು ಇತರೆ ಯಾವುದೇ ದಾಖಲಾತಿಗಳು/ ಮಾಹಿತಿಗಳು ತಪ್ಪು/ ಸುಳ್ಳು / ಪೋರ್ಜರಿಯಾಗಿದ್ದಲ್ಲಿ ಅಥವಾ ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ವಿನ್ಯಾಸಕ್ಕೆ ನೀಡಿರುವ ಅಂಗೀಕಾರವು ಯಾವುದೇ ಪೂರ್ವ ಸೂಚನೆ ಇಲ್ಲದೇ ಈ ವಿನ್ಯಾಸ ನಕ್ಷೆಯನ್ನು ರದ್ದು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರ ಹೊಂದಿರುತ್ತದೆ. |

06/03/2023

ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ-ಕಾರ್ಯದರ್ಶಿ
ನೆಲಮಂಗಲ ಯೋಜನಾ ಪ್ರಾಧಿಕಾರ
ನೆಲಮಂಗಲ

ಪ್ರತಿಯನ್ನು:

1. **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಹುಸ್ಕೂರು ಗ್ರಾಮ ಪಂಚಾಯಿತಿ**, ಬೆಂಗಳೂರು ಉತ್ತರ ತಾಲ್ಲೂಕು ರವರಿಗೆ ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
2. ಅರ್ಜಿದಾರರಾದ **ಮೆ:ಸಾಯಿ ಆಶಾ ಡೆವಲಪರ್ ಮತ್ತು ಇತರರು ರವರ ಪರವಾಗಿ ಜಿಪಿಎದಾರರಾದ Mindcomp Dwelling LLP, ನಂ.1125 / 12, 1ನೇ ಮಹಡಿ, ಸರ್ವೀಸ್ ರೋಡ್ , ಹಂಪಿನಗರ , ವಿಜಯನಗರ, ಬೆಂಗಳೂರು** ರವರ ಮಾಹಿತಿಗಾಗಿ ವಿನ್ಯಾಸದ ನಕ್ಷೆಯೊಂದಿಗೆ ಕಳುಹಿಸುತ್ತಾ, ಸದರಿ ವಿನ್ಯಾಸ ನಕ್ಷೆಯಂತೆ ರಸ್ತೆಗಳನ್ನು, ಉದ್ಯಾನವನ ಪ್ರದೇಶವನ್ನು ಮತ್ತು ಸಿ.ಎ ಹಾಗೂ ನಿವೇಶನಗಳನ್ನು ಸ್ಥಳದಲ್ಲಿ ಯಥಾವತ್ತಾಗಿ ಅಳವಡಿಸಿ, ಬಡಾವಣೆಯನ್ನು ನಿಯಮಾನುಸಾರ ಅಭಿವೃದ್ಧಿಪಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.
3. **ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ಎಲೆಕ್ಟ್ರಿಕ್) ಬೆಸ್ಕಾಂ**, ಬೆಂಗಳೂರು ಉತ್ತರ ತಾಲ್ಲೂಕು ರವರಿಗೆ ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. **ಸಹಾಯಕ ಕಾರ್ಯಪಾಲಕ ಅಭಿಯಂತರರು,** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸಂಸ್ಥೆ ಬೆಂಗಳೂರು ಉತ್ತರ ತಾಲ್ಲೂಕು ರವರಿಗೆ ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
5. **ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು** (ಜಿ.ಪಂ) ಬೆಂಗಳೂರು ಉತ್ತರ ತಾಲ್ಲೂಕು, ರವರಿಗೆ ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
6. **ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್, ಉಪ ವಿಭಾಗ**, ಬೆಂಗಳೂರು ಉತ್ತರ ತಾಲ್ಲೂಕು, ರವರಿಗೆ ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ
7. ಕಛೇರಿ ಪ್ರತಿ.